Akashvani : Bangalore
National Bulletin In Kannada
29.10.2024 / 19.35 hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ರೋಜ್‌ಗಾರ್ ಮೇಳ: ೫೧ ಸಾವಿರದ ಯುವಜನರಿಗೆ ನೇಮಕಾತಿ ಪತ್ರ ವಿತರಿಸಿದ ಪ್ರಧಾನಿ ನರೇಂದ್ರ ಮೋದಿ
- ಸರ್ದಾರ್ ವಲ್ಲಭಭಾಯಿ ಪಟೇಲ್ ಜನ್ಮದಿನದ ಅಂಗವಾಗಿ ದೇಶಾದ್ಯಂತ ಏಕತೆಗಾಗಿ ಓಟ ಮ್ಯಾರಾಥಾನ್ ಆಯೋಜನೆ
- ೭೦ ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಆಯುಷ್ಮಾನ್ ಭಾರತ್ ಪ್ರಧಾನಮಂತ್ರಿ ಜನಾರೋಗ್ಯ ಯೋಜನೆ ವಿಸ್ತರಣೆಗೆ ಚಾಲನೆ
- ಅಯೋಧ್ಯೆಯಲ್ಲಿ ಭವ್ಯವಾದ ದೀಪೋತ್ಸವಕ್ಕೆ ಸಕಲ ಸಿದ್ಧತೆ
- ಮಹಿಳಾ ಏಕದಿನ ಕ್ರಿಕೆಟ್: ಭಾರತಕ್ಕೆ ೨೩೩ ರನ್‌ಗಳ ಗುರಿ ನೀಡಿದ ನ್ಯೂಜಿಲೆಂಡ್

<><*<><>*><>

ರಾಷ್ಟ್ರಪತಿ ಭವನದಲ್ಲಿಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಕಲಾವಿದರ ತಂಡ ಭೇಟಿ ಮಾಡಿತು. ರಾಷ್ಟ್ರಪತಿ ಭವನದಲ್ಲಿ ಕಲಾವಿದರು ರಚಿಸಿದ ಕಲಾಕೃತಿಗಳನ್ನು ರಾಷ್ಟ್ರಪತಿಗಳು ವೀಕ್ಷಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ರಾಷ್ಟ್ರಪತಿ ದ್ರೌಪದಿ ಮುರ್ಮು, ಮಾನವ ಮತ್ತು ಪ್ರಕೃತಿಯ ನಡುವಿನ ಶಾಶ್ವತ ಸಂಬಂಧವು ಕಲೆಯಲ್ಲಿ ಪ್ರತಿಫಲಿಸುತ್ತದೆ ಎಂದು ಹೇಳಿದರು. ಈ ಸೃಜನಾತ್ಮಕ ಕಲಾಕೃತಿಗಳನ್ನು ಕೊಳ್ಳುವ ಮೂಲಕ ಕಲಾವಿದರನ್ನು ಪ್ರೋತ್ಸಾಹಿಸಬೇಕೆಂದು ಮನವಿ ಮಾಡಿದರು. ಕಲಾವಿದರು, ಆರ್ಟಿಸ್ಟ್-ಇನ್-ರೆಸಿಡೆನ್ಸಿ ಇನಿಶಿಯೇಟಿವ್ SRIJAN - ೨೦೨೪ ಅಡಿಯಲ್ಲಿ ಈ ತಿಂಗಳ ೨೧ ರಿಂದ ರಾಷ್ಟ್ರಪತಿ ಭವನದಲ್ಲಿ ತಂಗಿದ್ದಾರೆ. ವಾಸ್ತವ್ಯದ ಸಮಯದಲ್ಲಿ ಕಲಾವಿದರು, ನೈಸರ್ಗಿಕ ಬಣ್ಣಗಳಿಂದ ಸುಂದರವಾದ ವರ್ಣಚಿತ್ರಗಳನ್ನು ರಚಿಸಿದ್ದಾರೆ.

<><*<><>*><>

ಕೇಂದ್ರ ಸರ್ಕಾರದ ವಿವಿಧ ಸಚಿವಾಲಯ, ಇಲಾಖೆಗಳಲ್ಲಿ ಹೊಸದಾಗಿ ನೇಮಕಗೊಂಡ ೫೧ ಸಾವಿರದ ಯುವಜನರಿಗೆ ಉದ್ಯೋಗ ಮೇಳದಲ್ಲಿ ಇಂದು ಪ್ರಧಾನಿ ನರೇಂದ್ರ ಮೋದಿ ಅವರು

ನೇಮಕಾತಿ ಪತ್ರ ವಿತರಿಸಿದರು. ಬೆಂಗಳೂರು ಸೇರಿದಂತೆ ದೇಶಾದ್ಯಂತ ೪೦ ಸ್ಥಳಗಳಲ್ಲಿ ನಡೆದ ಉದ್ಯೋಗ ಮೇಳದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ವರ್ಚುವಲ್ ಮೂಲಕ ನೇಮಕಾತಿ ಪತ್ರಗಳನ್ನು ವಿತರಿಸಿದರು. ಬಳಿಕ ಮಾತನಾಡಿದ ಅವರು ದೇಶದ ಜನರಿಗೆ ಅತ್ಯಾಧುನಿಕ ಮತ್ತು ಗುಣಮಟ್ಟದ ಸೌಲಭ್ಯ ಒದಗಿಸುವುದರ ಜೊತೆಗೆ ಉದ್ಯೋಗಾವಕಾಶ ಸೃಷ್ಟಿಸುವುದು ಸರ್ಕಾರದ ಪರಮ ಆದ್ಯತೆಯಾಗಿದೆ ಎಂದರು. ಪಿಎಂ-ಸೂರ್ಯ ಘರ್ ಯೋಜನೆ ಮೂಲಕ ಜನರಿಗೆ ಉಚಿತ ವಿದ್ಯುತ್ ಒದಗಿಸುವ ಜೊತೆಗೆ ಹೆಚ್ಚಿನ ಉದ್ಯೋಗಾವಕಾಶ ಸೃಷ್ಟಿಸಲು ಸರ್ಕಾರ ಮುಂದಾಗಿದೆ ಎಂದು ತಿಳಿಸಿದರು.

ಧ್ವನಿ: ಪ್ರಧಾನಿ ನರೇಂದ್ರ ಮೋದಿ

<><*<><>*><>

ದೇಶಾದ್ಯಂತ ನಡೆದ ಉದ್ಯೋಗ ಮೇಳದಲ್ಲಿ ೫೦ ಸಾವಿರ ಮಂದಿಗೆ ನೇಮಕಾತಿ ಪತ್ರ ನೀಡಲಾಗಿದ್ದು, ಇವರಲ್ಲಿ ೨೦ ಸಾವಿರ ಮಂದಿಗೆ ಅಂಚೆ ಇಲಾಖೆ ಉದ್ಯೋಗ ನೀಡಿದೆ ಎಂದು ಕೇಂದ್ರ ಭಾರೀ ಕೈಗಾರಿಕೆ ಮತ್ತು ಉಕ್ಕು ಸಚಿವ ಎಚ್.ಡಿ. ಕುಮಾರಸ್ವಾಮಿ ಹೇಳಿದ್ದಾರೆ. ಅಂಚೆ ಇಲಾಖೆ ಸಹಭಾಗಿತ್ವದಲ್ಲಿ ಬೆಂಗಳೂರಿನಲ್ಲಿ ಇಂದು ನಡೆದ ರೋಜ್‌ಗಾರ್ ಮೇಳ ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರಿ ಉದ್ಯೋಗಿಗಳನ್ನು ಕರ್ಮಯೋಗಿಗಳು ಎಂದು ಪ್ರಧಾನಿ ಕರೆದಿರುವುದು ಅವರ ಹೊಸ ಚಿಂತನೆಯಾಗಿದೆ ಎಂದು ಹೇಳಿದರು. ಎಲ್ಲಾ ಸರ್ಕಾರಿ ನೌಕರರು ಮೋದಿ ಅವರ ಕಾರ್ಯಕ್ಕೆ ಕೈಜೋಡಿಸಬೇಕು ಎಂದು ಕರೆ ನೀಡಿದರು. ಸಂಸದ ಡಾ. ಸಿ.ಎನ್. ಮಂಜುನಾಥ್ ಮಾತನಾಡಿ, ಶೇಕಡ ೮ರಷ್ಟಿದ್ದ ದೇಶದ ನಿರುದ್ಯೋಗ ಪ್ರಮಾಣ, ಈಗ ಶೇಕಡ ೭ರಷ್ಟಿರುವುದು ಸಂತಸದ ಸಂಗತಿಯಾಗಿದೆ ಎಂದರು. ಇದೇ ವೇಳೆ ಬೆಂಗಳೂರಿನಲ್ಲಿ ೧೬೦ ಪ್ರಶಿಕ್ಷಣಾರ್ಥಿಗಳಿಗೆ ಮಂದಿಗೆ ಕುಮಾರಸ್ವಾಮಿ ನೇಮಕಾತಿ ಪತ್ರ ವಿತರಿಸಿದರು.

<><*<><>*><>

ಕೇಂದ್ರ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವಿಯಾ, ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರೊಂದಿಗೆ ನವದೆಹಲಿಂiಲ್ಲಿಂದು ಮೇಜರ್ ಧ್ಯಾನಚಂದ್ ಕ್ರೀಡಾಂಗಣದಲ್ಲಿ ನಡೆದ ಏಕತೆಗಾಗಿ ಓಟದಲ್ಲಿ ಪಾಲ್ಗೊಂಡಿದ್ದರು. ಭಾರತ ರತ್ನ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಜನ್ಮದಿನದ ಈ ಸಂದರ್ಭದಲ್ಲಿ ದೇಶಾದ್ಯಂತ ಏಕತಾ ಓಟವನ್ನು ಆಯೋಜಿಸಲಾಗಿದೆ. ಸಾಮಾಜಿಕ ಮಾಧ್ಯಮದ ಪೋಸ್ಟ್‌ನಲ್ಲಿ, ಡಾ. ಮಾಂಡವೀಯ ಅವರು

ನಾಗರಿಕರು ಏಕತೆಗಾಗಿ ಓಟದಲ್ಲಿ ಭಾಗವಹಿಸಿ ಮತ್ತು ಏಕತೆಯೊಂದಿಗೆ ಫಿಟ್ ಇಂಡಿಯಾದ ಸಂದೇಶವನ್ನು ನೀಡಬೇಕೆಂದು ಜನತೆಯಲ್ಲಿ ಮನವಿ ಮಾಡಿದ್ದಾರೆ.

<><*<><>*><>

ಒಡಿಶಾದ ಮುಖ್ಯಮಂತ್ರಿ ಮೋಹನ್ ಚರಣ್ ಮಾಝಿ ಮತ್ತು ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು ರಾಷ್ಟ್ರೀಯ ಏಕತಾ ದಿವಸ್ ಹಾಗೂ ಭಾರತದ ಉಕ್ಕಿನ ಮನುಷ್ಯ ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ ೧೫೦ ನೇ ಜನ್ಮದಿನವನ್ನು ಆಚರಿಸಲು 'ಏಕತೆಗಾಗಿ ಓಟ' ಮ್ಯಾರಥಾನ್‌ಗೆ ಚಾಲನೆ ನೀಡಿದರು. ಭುವನೇಶ್ವರದ ಕಳಿಂಗ ಕ್ರೀಡಾಂಗಣದಲ್ಲಿ ಶಾಲಾ ಮಕ್ಕಳು ಸೇರಿದಂತೆ ಸುಮಾರು ಮೂರು ಸಾವಿರ ಜನರು ಮ್ಯಾರಥಾನ್‌ನಲ್ಲಿ ಭಾಗವಹಿಸಿದ್ದರು. ಉತ್ತರ ಪ್ರದೇಶದಲ್ಲಿ ಆಯೋಜಿಸಿದ್ದ 'ಏಕತೆಗಾಗಿ ಓಟ' ಮ್ಯಾರಥಾನ್ ವೇಳೆ ಮಾತನಾಡಿದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ಎಲ್ಲರೂ ಒಗ್ಗೂಡಿ ಸರ್ದಾರ್ ವಲ್ಲಭಭಾಯ್ ಪಟೇಲ್ ಅವರು ಪ್ರತಿಪಾದಿಸಿದ ಏಕತೆಯ ಪರಂಪರೆಯನ್ನು ಗೌರವಿಸಬೇಕು. ಈ ಮ್ಯಾರಥಾನ್‌ಗಳು ರಾಷ್ಟ್ರೀಯ ಸಮಗ್ರತೆಯ ಪ್ರಾಮುಖ್ಯತೆಯನ್ನು ಎತ್ತಿ ತೋರಿಸುವುದಲ್ಲದೆ, ರಾಜ್ಯಗಳಾದ್ಯಂತ ಸಮುದಾಯ ಮನೋಭಾವವನ್ನು ಬೆಳೆಸುತ್ತವೆ ಎಂದು ಹೇಳಿದರು.

<><*<><>*><>

ಅಹಮದಾಬಾದ್‌ನಲ್ಲಿ 'ರಾಷ್ಟ್ರೀಯ ಏಕತಾ ದಿನ'ದ ಅಂಗವಾಗಿ ಏಕತೆಗಾಗಿ ಓಟ ಮ್ಯಾರಥಾನ್‌ಗೆ ಗುಜರಾತ್ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ಚಾಲನೆ ನೀಡಿದರು. ನಂತರ ಮಾತನಾಡಿದ ಅವರು, ಏಕತೆಯ ಓಟವು ಏಕೀಕೃತ ಭಾರತದ ಶಿಲ್ಪಿ ಸರ್ದಾರ್ ವಲ್ಲಭಬಾಯ್ ಪಟೇಲ್ ಅವರಿಗೆ ಸಲ್ಲಿಸುವ ಗೌರವವಾಗಿದೆ ಎಂದು ಹೇಳಿದರು. ಸರ್ದಾರ್ ವಲ್ಲಭಬಾಯ್ ಪಟೇಲ್ ಅವರ ಜನ್ಮದಿನದ ಸ್ಮರಣಾರ್ಥ ಇಂದು ರಾಜ್ಯದ ವಿವಿಧ ಭಾಗಗಳಲ್ಲಿ ಏಕತೆಗಾಗಿ ಓಟ ಆಯೋಜಿಸಲಾಗಿತ್ತು. ಹೆಚ್ಚಿನ ಸಂಖ್ಯೆಯಲ್ಲಿ ಜನರು ಓಟದಲ್ಲಿ ಪಾಲ್ಗೊಂಡಿದ್ದರು.

<><*<><>*><>

ಧನ್ವಂತರಿ ಜಯಂತಿ ಅಂಗವಾಗಿ ನವದೆಹಲಿಯಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಬೆಂಗಳೂರಿನ ಆನೇಕಲ್ ತಾಲೂಕಿನ ಇಗ್ಗಲೂರು ಗ್ರಾಮದಲ್ಲಿ ೨೦೦ ಹಾಸಿಗೆಗಳ ಇಎಸ್‌ಐ ಆಸ್ಪತ್ರೆಯ ಶಂಕುಸ್ಥಾಪನೆ ನೇರವೇರಿಸಿದರು. ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಮತ್ತು ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ದೆಹಲಿಯಿಂದ ವರ್ಚ್ಯುವಲ್

ಮೂಲಕ ಭಾಗವಹಿಸಿದರು. ಕಾರ್ಯಕ್ರಮದಲ್ಲಿ ಮಾತನಾಡಿದ ಬೆಂಗಳೂರು ಗ್ರಾಮಾಂತರ ಸಂಸದ ಸಿ. ಎನ್ ಮಂಜುನಾಥ್ ಈ ಭಾಗದ ಜನರಿಗೆ ಇಎಸ್ಐ ಆಸ್ಪತ್ರೆ ಅವಶ್ಯಕತೆಯಿದ್ದು ಎಲ್ಲರ ಶ್ರಮದೊಂದಿಗೆ ಇಂದು ಶಂಕುಸ್ಥಾಪನೆ ನೆರವೇರಿಸಲಾಗಿದೆ. ಕಾರ್ಮಿಕರು ಇದರ ಸದುಪಯೋಗಪಡೆದುಕೊಳ್ಳುವಂತೆ ಕರೆ ನೀಡಿದರು. ಇದೇ ವೇಳೆ ಪ್ರಧಾನಿ ದೇಶಾದ್ಯಂತ ಸುಮಾರು ೧೨ ಸಾವಿರದ ೮೫೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಆರೋಗ್ಯ ಯೋಜನೆಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ನೆರವೇರಿಸಿದರು. ೭೦ ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಆಯುಷ್ಮಾನ್ ಭಾರತ್ ಪ್ರಧಾನಮಂತ್ರಿ ಜನಾರೋಗ್ಯ ಯೋಜನೆ ವಿಸ್ತರಣೆಗೂ ಪ್ರಧಾನಿ ಚಾಲನೆ ನೀಡಿದರು.

<><*<><>*><>

ಶ್ರೀ ರಾಮನ ಜನ್ಮಭೂಮಿ ಅಯೋಧ್ಯೆಯು ಭವ್ಯವಾದ ದೀಪೋತ್ಸವಕ್ಕೆ ಸಾಕ್ಷಿಯಾಗಲು ಸಿದ್ಧವಾಗಿದೆ. ಇದು ವಿಶ್ವದ ಯಾವುದೇ ನದಿಯ ಘಾಟ್‌ಗಳ ಮೇಲೆ ದೀಪಗಳನ್ನು ಬೆಳಗಿಸುವ ಹಿಂದಿನ ಎಲ್ಲಾ ಗಿನ್ನೆಸ್ ದಾಖಲೆಗಳನ್ನು ಸರಿಗಟ್ಟುವ ನಿರೀಕ್ಷೆಯಿದೆ. ಇಂದು ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಈ ದೀಪಾವಳಿಯು ಐತಿಹಾಸಿಕವಾದದ್ದು, ಅಯೋಧ್ಯೆಯ ಶ್ರೀರಾಮನ ದೇವಾಲಯವು ಸಾವಿರಾರು ದೀಪಗಳಿಂದ ಬೆಳಗಲಿದ್ದು, ಆಚರಣೆಗಳನ್ನು ಅಭೂತಪೂರ್ವವಾಗಿಸುತ್ತದೆ ಎಂದು ಹೇಳಿದರು. ಮತ್ತೊಂದೆಡೆ, ಅಯೋಧ್ಯೆಯಲ್ಲಿ ನಾಳೆ ಭವ್ಯ ದೀಪೋತ್ಸವಕ್ಕೆ ಸಿದ್ಧತೆಗಳು ಭರದಿಂದ ಸಾಗಿವೆ. ಹೊಸ ವಿಶ್ವ ದಾಖಲೆ ನಿರ್ಮಿಸಲು ಪವಿತ್ರ ಸರಯೂ ಘಾಟ್‌ಗಳಲ್ಲಿ ಒಟ್ಟು ೨೮ ಲಕ್ಷ ದೀಪಗಳ ವ್ಯವಸ್ಥೆ ಮಾಡಲಾಗಿದೆ. ನಾಳೆ ಸಂಜೆ ಮುಖ್ಯ ಕಾರ್ಯಕ್ಕಾಗಿ ಇಡೀ ನಗರವನ್ನು ಸ್ವಚ್ಛಗೊಳಿಸಿ ಅಲಂಕರಿಸಲಾಗುತ್ತಿದೆ. ಅಯೋಧ್ಯೆಯಾದ್ಯಂತ ೩೫ ಲಕ್ಷಕ್ಕೂ ಅಧಿಕ ದೀಪಗಳನ್ನು ಬೆಳಗಿಸುವ ಸಾಧ್ಯತೆ ಇದೆ. ತುರ್ತು ಪರಿಸ್ಥಿತಿಯನ್ನು ನಿಭಾಯಿಸಲು ಘಾಟ್‌ಗಳಲ್ಲಿ ಐದು ನಿಯಂತ್ರಣ ಕೊಠಡಿಗಳನ್ನು ಸ್ಥಾಪಿಸಲಾಗಿದೆ. ನೈರ್ಮಲ್ಯ ವಾಹನಗಳ ಮೂಲಕ ಘಾಟ್‌ಗಳನ್ನು ನಿರಂತರವಾಗಿ ಸ್ವಚ್ಛಗೊಳಿಸಲಾಗುತ್ತಿದೆ.

<><*<><>*><>

ಮಹಾರಾಷ್ಟ್ರ ವಿಧಾನಸಭೆ ಚುನಾವಣೆಗೆ ನಾಮಪತ್ರ ಸಲ್ಲಿಸಲು ಕೊನೆಯ ದಿನವಾದ ಇಂದು ರಾಜ್ಯಾದ್ಯಂತ ನಾಮಪತ್ರ ಸಲ್ಲಿಸುವ ಪ್ರಕ್ರಿಯೆ ಬಿರುಸುಗೊಂಡಿತ್ತು. ಮಹಾರಾಷ್ಟ್ರ ಬಿಜೆಪಿ ಅಧ್ಯಕ್ಷ ಚಂದ್ರಶೇಖರ ಬಾವಂಕುಲೆ, ಇಂದು ಕಮ್ಟಿ ವಿಧಾನಸಭಾ ಕ್ಷೇತ್ರದಿಂದ ನಾಮಪತ್ರ ಸಲ್ಲಿಸಿದರು.

ಮಹಾರಾಷ್ಟ್ರ ಕಾಂಗ್ರೆಸ್ ಅಧ್ಯಕ್ಷ ನಾನಾ ಪಟೋಲೆ, ಸಕೋಲಿಯಿಂದ ನಾಮಪತ್ರ ಸಲ್ಲಿಸಿದ್ದಾರೆ. ಜೋಗೇಶ್ವರಿ ಪೂರ್ವದಿಂದ ಶಿವಸೇನೆಯ ಮನೀಶಾ ವೈಕರ್, ಛತ್ರಪತಿ ಸಂಭಾಜಿನಗರ ಪಶ್ಚಿಮದಿಂದ ಸಂಜಯ್ ಸಿರ್ಸತ್, ಪುಣೆಯ ಕಸ್ಬಾ ಪೇಠದಿಂದ ಬಿಜೆಪಿಯ ಹೇಮಂತ್ ರಸಾನೆ, ಎನ್‌ಸಿಪಿಯ ಸುನೀಲ್ ಟಿಂಗ್ರೆ ವಡ್ಗಾಂವ್ ಶೇರಿ ಕ್ಷೇತ್ರದಿಂದ ನಾಮಪತ್ರ ಸಲ್ಲಿಸಿದರು. ಏತನ್ಮಧ್ಯೆ, ಬಾರಾಮತಿ ಕ್ಷೇತ್ರದ ಮಹಾ ವಿಕಾಸ್ ಅಘಾಡಿಯ ಅಭ್ಯರ್ಥಿ ಯುಗೇಂದ್ರ ಪವಾರ್ ಅವರ ಪರ ಸಂಸದೆ ಸುಪ್ರಿಯಾ ಸುಳೆ ಕನ್ಹೇರಿಯಲ್ಲಿ ಪ್ರಚಾರ ನಡೆಸಿದರು.

<><*<><>*><>

ನವದೆಹಲಿಯಲ್ಲಿಂದು ನಡೆದ ಸೇನಾ ಕಮಾಂಡರ್‌ಗಳ ಸಮ್ಮೇಳನದಲ್ಲಿ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಭಾಗವಹಿಸಿದ್ದರು. ಸಮ್ಮೇಳನದಲ್ಲಿ ಸಚಿವರು, ಪ್ರಸ್ತುತ ಭೌಗೋಳಿಕ ರಾಜಕೀಯದ ಜಟಿಲತೆಗಳ ಸವಾಲುಗಳು, ಸಾಧ್ಯತೆಗಳು ಮತ್ತು ಅವಕಾಶಗಳ ಬಗ್ಗೆ ಚರ್ಚಿಸಿದರು. ಈ ಸಂದರ್ಭದಲ್ಲಿ, ರಾಷ್ಟ್ರೀಯ ಭದ್ರತೆಯನ್ನು ಪರಿಣಾಮಕಾರಿಯಾಗಿ ಮುನ್ನಡೆಸಲು ಸರ್ವಾಂಗೀಣ ವಿಧಾನದ ಅಗತ್ಯವಿದೆ ಎಂದು ಸಚಿವರು ಒತ್ತಾಯಿಸಿದರು.

<><*<><>*><>

ಭಾರತವು ಪ್ಯಾಲೆಸ್ತೈನ್ ಜನರಿಗೆ ಎರಡನೇ ಹಂತದ ಸಹಾಯವನ್ನು ರವಾನಿಸಿದೆ. ಮಾನವೀಯ ಸಹಾಯವಾಗಿ ಅಗತ್ಯ ಜೀವರಕ್ಷಕ ಮತ್ತು ಕ್ಯಾನ್ಸರ್ ವಿರೋಧಿ ಔಷಧಗಳು ಸೇರಿದಂತೆ ೩೦ ಟನ್ ವೈದ್ಯಕೀಯ ಸಾಮಗ್ರಿಗಳನ್ನು ಕಳುಹಿಸಲಾಗಿದೆ. ಇಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ವಿದೇಶಾಂಗ ವ್ಯವಹಾರಗಳ ವಕ್ತಾರ ರಣಧೀರ್ ಜೈಸ್ವಾಲ್, ಪ್ಯಾಲೆಸ್ತೈನ್ ಜನರಿಗೆ ಭಾರತದ ಬೆಂಬಲ ಮುಂದುವರೆದಿದೆ ಮತ್ತು ೩೦ ಟನ್ ವೈದ್ಯಕೀಯ ಸಾಮಗ್ರಿಗಳನ್ನು ರವಾನಿಸಲಾಗಿದೆ ಎಂದಿದ್ದಾರೆ. ಈ ತಿಂಗಳ ೨೨ ರಂದು, ಭಾರತವು ೩೦ ಟನ್ ಔಷಧಿ ಮತ್ತು ಆಹಾರ ಪದಾರ್ಥಗಳನ್ನು ಒಳಗೊಂಡಿರುವ ಮೊದಲ ಹಂತದ ಸಹಾಯವನ್ನು ರವಾನಿಸಿತ್ತು. ಪ್ಯಾಲೆಸ್ತೀನ್ ನಿರಾಶ್ರಿತರಿಗಾಗಿ ವಿಶ್ವಸಂಸ್ಥೆಯ ಪರಿಹಾರ ಮತ್ತು ಕಾರ್ಯಗಳ ಸಂಸ್ಥೆ ಮೂಲಕ ಸಹಾಯವನ್ನು ಕಳುಹಿಸಲಾಗಿದೆ.

<><*<><>*><>

ಯುನೈಟೆಡ್ ನೇಷನ್ಸ್ ರಿಲೀಫ್ ಅಂಡ್ ವರ್ಕ್ಸ್ ಏಜೆನ್ಸಿ ಫಾರ್ ಪ್ಯಾಲೆಸ್ತೈನ್ ರೆಫ್ಯೂಜೀಸ್ ಇನ್ ದಿ ನಿಯರ್ ಈಸ್ಟ್ - UNRWA ಇಸ್ರೇಲ್‌ನಲ್ಲಿ ಕಾರ್ಯನಿರ್ವಹಿಸುವುದನ್ನು ನಿಷೇಧಿಸುವ

ಕಾನೂನನ್ನು ಇಸ್ರೇಲ್ ಸಂಸತ್ ಅಂಗೀಕರಿಸಿದೆ. ೧೨೦ ಸಂಸತ್ ಸದಸ್ಯರ ಪೈಕಿ ನಿಷೇಧದ ಒರ ೯೨ ಸದಸ್ಯರು ಬೆಂಬಲಿಸಿದ್ದಾರೆ. ಅಮೆರಿಕ ಮತ್ತು ಹಲವಾರು ಯುರೋಪಿಯನ್ ರಾಷ್ಟ್ರಗಳ ವಿರೋಧದ ಹೊರತಾಗಿಯೂ ಈ ಹೊಸ ಕಾನೂನನ್ನು ಜಾರಿಗೊಳಿಸಲಾಯಿತು. ಇದು ಇಸ್ರೇಲಿ ಪ್ರದೇಶದೊಳಗೆ UಓಖW◌ಂ ಯಾವುದೇ ಚಟುವಟಿಕೆಗಳನ್ನು ನಡೆಸುವುದನ್ನು ನಿಷೇಧಿಸುತ್ತದೆ.

<><*<><>*><>

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಭಾರತ ಮತ್ತು ನ್ಯೂಜಿಲೆಂಡ್ ಮಹಿಳಾ ಕ್ರಿಕೆಟ್‌ನ ೩ನೇ ಹಾಗೂ ಅಂತಿಮ ಏಕದಿನ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ನ್ಯೂಜಿಲೆಂಡ್ ತಂಡ ೪೯.೫ ಓವರ್‌ಗಳಲ್ಲಿ ಎಲ್ಲಾ ವಿಕೆಟ್ ಕಳೆದುಕೊಂಡು ೨೩೨ ರನ್ ಗಳಿಸಿದೆ. ಗುರಿ ಬೆನ್ನತ್ತಿರುವ ಭಾರತ ಮಹಿಳಾ ತಂಡ ಇತ್ತೀಚಿನ ವರದಿಯಂತೆ ೩೦.೨ ಓವರ್‌ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೧೪೫ ರನ್ ಮಾಡಿ ಆಡುತ್ತಿದೆ.

<><*<><>*><>

ಮುಂಬರುವ ಮಹಿಳೆಯರ ಏಷ್ಯನ್ ಹಾಕಿ ಚಾಂಪಿಯನ್ಸ್ ಟ್ರೋಫಿಗೆ ೧೮ ಆಟಗಾರ್ತಿಯರ ಭಾರತ ತಂಡವನ್ನು ಪ್ರಕಟಿಸಲಾಗಿದೆ. ಟೂರ್ನಿ ಬಿಹಾರದ ರಾಜ್ ಗಿರ್ ಹಾಕಿ ಕ್ರೀಡಾಂಗಣದಲ್ಲಿ ನವಂಬರ್ ೧೧ ರಿಂದ ೨೦ರ ವರೆಗೆ ನಡೆಯಲಿದೆ. ಹಾಲಿ ಚಾಂಪಿಯನ್ ಭಾರತ ಮಿಡ್ ಫೀಲ್ಡರ್ ಸಲೀಮಾ ಟೇಟೆ ಅವರ ನೇತೃತ್ವದಲ್ಲಿ ಉಪ ನಾಯಕಿಯಾಗಿ ನವನೀತ್ ಕೌರ್ ಆಯ್ಕೆಯಾಗಿದ್ದಾರೆ. ಭಾರತ, ಟೂರ್ನಿಯ ಆರಂಭದಲ್ಲಿ ಮಲೇಷ್ಯಾ ಎದುರು ಸೆಣಸಲಿದೆ. ನಂತರ ಚೈನಾ, ಜಪಾನ್, ಕೊರಿಯಾ ಮತ್ತು ಥೈಲೆಂಡ್ ಎದುರು ಪಂದ್ಯಗಳನ್ನಾಡಲಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>